# ಜನರ ಕೈಲಿದೆ ಲಾಕ್‌ಡೌನ್ ಭವಿಷ್ಯ

26/6/20

**ಸಂ.ಕ. ಸಮಾಚಾರ ಬೆಂಗಳೂರು:**

ಬೆಂಗಳೂರು ಲಾಕ್‌ಡೌನ್ ಆಗೋದು ಬಿಡುವುದು ಬೆಂಗಳೂರಿಗರ ಕೈಯಲ್ಲಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದ್ದಾರೆ.

ಮತ್ತೆ ಲಾಕ್‌ಡೌನ್ ಮಾಡುವ ವದಂತಿಗಳಿಗೆ ಸಂಬಂಧಿಸಿದಂತೆ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಅವರು, ಬೆಂಗಳೂರಿನಲ್ಲಿ ಕೊರೊನಾ ಸೋಂಕು ಹೆಚ್ಚುತ್ತಿದೆ. ಇದನ್ನು ತಡೆಗಟ್ಟಲು ಎಲ್ಲ ರೀತಿಯ ಪ್ರಯತ್ನ ಮಾಡಲಾಗುತ್ತಿದೆ. ಕೆಲವು ಪ್ರದೇಶಗಳನ್ನು ಸೀಲ್‌ಡೌನ್ ಮಾಡಲಾಗಿದೆ. ಬೆಂಗಳೂರು ಲಾಕ್‌ಡೌನ್ ಆಗಬೇಕೋ ಅಥವಾ ಬೇಡವೋ ಎಂಬುದು ಬೆಂಗಳೂರಿಗರ ಮೇಲಿದೆ. ಸಂಪೂರ್ಣ ಲಾಕ್‌ಡೌನ್ ಆಗಬಾರದು ಎಂದರೆ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸಿ ಜನರು ಸಹಕರಿಸಬೇಕಾಗುತ್ತದೆ ಎಂದರು.



ಈಗ ಸದ್ಯಕ್ಕೆ ಲಾಕ್‌ಡೌನ್ ಮಾಡಬೇಕೋ ಅಥವಾ ಬೇಡವೋ ಎಂಬ ಬಗ್ಗೆ ಮುಂದೆ ಗಮನಿಸಲಾಗುತ್ತದೆ. ಈಗ ಮಕ್ಕಳು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯುತ್ತಿದ್ದಾರೆ. ಅವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗುತ್ತದೆ ಎಂದ ಅವರು, ಈ ವಿಷಯವಾಗಿ ಬೆಂಗಳೂರಿನ ಶಾಸಕರ ಜೊತೆ ಚರ್ಚೆ ಮಾಡಿ ಕೊರೊನಾ ತಡೆಗಟ್ಟಲು ಏನು ಕ್ರಮ ಕೈಗೊಳ್ಳಬೇಕು ಎಂಬ ಬಗ್ಗೆ ಸಲಹೆಗಳನ್ನು ಪಡೆದುಕೊಳ್ಳಲಾಗುತ್ತದೆ ಎಂದರು.